# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ವಿಧಾನ ಪರಿಷತ್ತ ಸದಸ್ಯರ ಹೆಸರು:** | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 539 (598) |
| **ಉತ್ತರಿಸಬೇಕಾದ ದಿನಾಂಕ:** | 21-02-2022. |
| **ಉತ್ತರಿಸುವ ಸಚಿವರು:** | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿಯಲ್ಲಿ ನಿರ್ಮಾಣವಾಗುತ್ತಿರುವ ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಟ್ಟಡ ಕಾಮಗಾರಿಗೆ ರೂ.309,54,29,000/- ಮಂಜೂರಾಗಿದ್ದು, ಸದರಿ ಅನುದಾನದಲ್ಲಿ ಯಾವ ಯಾವ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಹಾಗೂ ಯಾವಾಗ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು; (ವಿವರ ನೀಡುವುದು) | ಯಾದಗಿರಿಯಲ್ಲಿ ನಿರ್ಮಾಣವಾಗುತ್ತಿರುವ ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಟ್ಟಡ ಕಾಮಗಾರಿಗೆ ರೂ.309,54,29,000/-ಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ಸದರಿ ಅನುದಾನದಲ್ಲಿ ಶೈಕ್ಷಣಿಕ ವಿಭಾಗ(ನೆಲಮಹಡಿ+3), ಪುರುಷ ಮತ್ತು ಮಹಿಳೆಯರ ವಸತಿ ಗೃಹ (ನೆಲಮಹಡಿ+5), ಬೋಧಕ(ನೆಲಮಹಡಿ+3) ಮತ್ತು ಬೋಧಕೇತರ ಸಿಬ್ಬಂದಿ(ನೆಲಮಹಡಿ+5), ಶುಶ್ರೂಷಕಿಯರ ವಸತಿ ಗೃಹ(ನೆಲಮಹಡಿ+5), ಡೀನ್ ಮತ್ತು ಪ್ರಾಂಶುಪಾಲರ ವಸತಿ ಗೃಹಗಳು, ಯಾದಗಿರಿ ವೈದ್ಯಕೀಯ ಕಾಲೇಜಿಗೆ ಕೂಡುವ ರಸ್ತೆ ಹಾಗೂ ತಡೆಗೋಡೆ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ದಿನಾಂಕ:28-09-2020ರಂದು ಈಗಾಗಲೇ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಗಿರುತ್ತದೆ. |
| ಆ) | ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಟ್ಟಡ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ. (ವಿವರ ನೀಡುವುದು) | ಸದರಿ ಕಟ್ಟಡದ 02 ಮತ್ತು 03ನೇ ಅಂತಸ್ಥುಗಳ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಯಾದಗಿರಿ ವೈದ್ಯಕೀಯ ಕಾಲೇಜಿಗೆ ಕೂಡುವ ರಸ್ತೆಯ ಒಂದು ಬದಿಯಲ್ಲಿ ಈಗಾಗಲೇ ಕಾಮಗಾರಿಯು ಪೂರ್ಣಗೊಂಡಿದ್ದು, ಸಂಪರ್ಕ ಕಲ್ಪಿಸಲಾಗಿದೆ. ಕೂಡುವ ರಸ್ತೆಯ ಮತ್ತೊಂದು ಭಾಗದ ಹಾಗೂ ಕಾಂಪೌಂಡ್ ಗೋಡೆಯ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |
| ಇ) | ಸದರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಟ್ಟಡದ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ. (ವಿವರ ನೀಡುವುದು) | ಸದರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಕಟ್ಟಡ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಲು ಸರ್ಕಾರವು ಬೆಂಗಳೂರಿನ ಕರ್ನಾಟಕ ಟೆಸ್ಟ್ ಹೌಸ್ (ಕೆ.ಟಿ.ಹೆಚ್) ಇವರ 03ನೇ ತನಿಖಾ ತಂಡದವರಿಂದ ಕ್ರಮ ಕೈಗೊಳ್ಳಲಾಗಿದೆ. |

ಸಂಖ್ಯೆ: ಎಂಇಡಿ 84 ಎಂಪಿಎಸ್ 2022

(ಡಾ.ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖಾ ಸಚಿವರು